# <u>ಕರ್ನಾಟಕ ವಿಧಾನ ಪರಿಷತ್ತು</u>

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **221** |
| ಸದಸ್ಯರ ಹೆಸರು | : | ಶ್ರೀ ಹೆಚ್.ಎಸ್.ಗೋಪಿನಾಥ್<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | **14.02.2024** |
| ಉತ್ತರಿಸುವ ಸಚಿವರು | : | ಕಂದಾಯ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಸರ್ಕಾರ ಪರಿಶಿಷ್ಟ ಜನಾಂಗದವರಿಗೆ ಇಲ್ಲಿಯವರಿಗೆ ಯಾವ ರೀತಿಯಲ್ಲಿ ಜಮೀನು ಹಂಚಿಕೆ ಮಾಡಿದೆ; (ವಿವರ ಒದಗಿಸುವುದು) | ಸರ್ಕಾರ ಪರಿಶಿಷ್ಟ ಜನಾಂಗದವರಿಗೆ ದಿನಾಂಕ: 14.04.1990ರ ಹಿಂದಿನ ಒಂದು ವರ್ಷ ಕಡಿಮೆ ಇಲ್ಲದಂತೆ ಸರ್ಕಾರಿ ಜಮೀನಿನಲ್ಲಿ ಅನಧಿಕೃತವಾಗಿ ಮಾಡುತ್ತಿರುವ ಸಾಗುವಳಿ ಸಕ್ರಮಗೊಳಿಸುವ ಸಲುವಾಗಿ ಕರ್ನಾಟಕ ಭೂ ಕಂದಾಯ ಕಾಯ್ದೆ, 1964ರ ಕಲಂ 94-ಎ, 94-ಬಿರಡಿ ಕ್ರಮವಾಗಿ ನಮೂನೆ-50 ಹಾಗೂ 53 ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. ತದನಂತರ, 01.01.2005ರ ಹಿಂದಿನ ಒಂದು ವರ್ಷ ಕಡಿಮೆ ಇಲ್ಲದಂತೆ ಸರ್ಕಾರಿ ಜಮೀನಿನಲ್ಲಿ ಅನಧಿಕೃತವಾಗಿ ಮಾಡುತ್ತಿರುವ ಸಾಗುವಳಿ ಸಕ್ರಮಗೊಳಿಸುವ ಸಲುವಾಗಿ ಕರ್ನಾಟಕ ಭೂ ಕಂದಾಯ ಕಾಯ್ದೆ, 1964ರ ಕಲಂ 94-ಎ(4)ರಡಿ ನಮೂನೆ-57 ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. ಅದರಂತೆ, ಸ್ವೀಕರಿಸಿದ ಅರ್ಜಿಗಳನ್ನು ನಿಯಮಾನುಸಾರ ಪರಿಶೀಲಿಸಿ, ಬಗರ್ ಹುಕುಂ ಸಾಗುವಳಿ ಸಮಿತಿ ಮುಂದೆ ಮಂಡಿಸಿ ಅರ್ಹ ಫಲಾನುಭವಿಗಳಿಗೆ ಸಾಗುವಳಿ ಚೀಟಿ ನೀಡಲಾಗಿರುತ್ತದೆ |
| ಆ) | ಸದರಿ ಜಮೀನನ್ನು ಹಂಚಿಕೆದಾರರು ಮಾರಾಟ ಮಾಡಿಕೊಳ್ಳಬಹುದೇ; ಹಾಗಿದ್ದಲ್ಲಿ, ಸರ್ಕಾರ ವಿಧಿಸಿರುವ ಷರತ್ತುಗಳೇನು; | ಜಮೀನು ಮಂಜೂರಾಗಿ ಸಾಗುವಳಿ ಚೀಟಿ ನೀಡಿದ ದಿನಾಂಕದಿಂದ ಸಾಗುವಳಿ ಚೀಟಿಯಲ್ಲಿ ನಮೂದಿಸಿರುವಂತೆ ಸಂದರ್ಭಾನುಸಾರ 15 ವರ್ಷ ಅಥವಾ 25 ವರ್ಷಗಳ ಅವಧಿ ಮುಗಿದ ನಂತರ ಸರ್ಕಾರದ ಪೂರ್ವಾನುಮತಿ ಪಡೆದು ಮಾರಾಟ ಮಾಡಬಹುದಾಗಿದೆ. |
| ಇ) | ಸದರಿ ಜಮೀನನ್ನು ಪರಿಶಿಷ್ಟರಲ್ಲದವರು ಖರೀದಿಸಬೇಕಾದರೆ ಪಾಲಿಸ ಬೇಕಿರುವ ಷರತ್ತುಗಳೇನು; ಈ ರೀತಿಯ ಷರತ್ತುಗಳನ್ನು ವಿಧಿಸಿರಲು ಕಾರಣಗಳೇನು; | ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಸರ್ಕಾರದಿಂದ ಮಂಜೂರಾದ ಜಮೀನನ್ನು ಸದರಿಯವರು ಸರ್ಕಾರದ ಪೂರ್ವಾನುಮತಿ ಪಡೆದ ನಂತರ ಯಾವುದೇ ವರ್ಗದ ಜನರು ಖರೀದಿಸಬಹುದಾಗಿದೆ. |
| ಈ) | ಸರ್ಕಾರದ ಕೆಲವು ನಿಯಮಗಳು ಪೂರ್ವಾನ್ವಯದಿಂದ ಜಾರಿಯಾಗಿರುವುದರಿಂದ ಸದರಿ ಖರೀದಿದಾರರ ವಿರುದ್ಧ ನ್ಯಾಯಾಲಯದಲ್ಲಿ ವಿವಿಧ ರೀತಿಯ ವ್ಯಾಜ್ಯಗಳು ದಾಖಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಖರೀದಾರರಿಗೆ ಸರ್ಕಾರದಿಂದ ಯಾವ ರೀತಿಯ ನಿಯಮಾವಳಿಗಳನ್ನು ರಚಿಸಲಾಗುತ್ತಿದೆ? | ಸರ್ಕಾರದ ಗಮನಕ್ಕೆ ಬಂದಿದೆ. ಇಂತಹ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ. |

ಸಂಖ್ಯೆ: ಆರ್‌ಡಿ 9 ಎಲ್‌ಜಿಕ್ಯೂ 2024

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು